ಎಂಜಿನಿಯರಿಂಗ್, ವೈದ್ಯಕೀಯ ವಿಷಯ ಕನ್ನಡದಲ್ಲಿ ಪಠ್ಯಕ್ರಮ

ಬೆಂಗಳೂರು: ಕನ್ನಡ ಭಾಷೆಯು ಅತ್ಯಂತ ಪ್ರಾಚೀನವೂ ಮತ್ತು ಶಾಸ್ತ್ರೀಯ ಭಾಷೆಗಳಲ್ಲಿ ಪ್ರಮುಖವಾಗಿದ್ದು, ಎಂಜಿನಿಯರಿಂಗ್, ವೈದ್ಯಕೀಯ ವಿಷಯಗಳನ್ನು ಸರಳ ಮತ್ತು ಸುಲಲಿತವಾಗಿ, ವಿಧ್ಯಾರ್ಥಿಗಳಿಗೆ ಭೋದಿ ಸಲು ನೆರವಾಗುವಂತೆ ಪಠ್ಯಕ್ರಮಗಳ ರಚನೆ ಅಗತ್ಯವಿದೆ ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ, ಹೇಳಿದರು. ಕನ್ನಡದ ಖ್ಯಾತ ಸಾಹಿತಿಗಳೂ ಮತ್ತು ಸಂಶೋ ಧಕ ಹಂಪ ನಾಗರಾಜಯ್ಯ ಅವರು ರಚಿಸಿರುವ ಚಾರುಲತ- ವಸಂತ ಎಂಬ ಕಾವ್ಯ ಕಥನದ ಇಂಗ್ಲಿಷ್ ಅನುವಾದ ಕೃತಿ ಬಿಡುಗಡೆಗೊಳಿಸಿ ಮಾತನಾಡಿ, ಹಂಪನಾ ರಚಿಸಿರುವ ಚಾರುಲತಾ-ವಸಂತ, ಕೃತಿ, ಕನ್ನಡದಲ್ಲಿ ರಚಿತವಾದ ಸುಂದರ ಕಥನಾ ಕಾವ್ಯವಾಗಿದ್ದು, ಇಂಥ ಕೃತಿಯನ್ನು, ಮೂಲ ಕೃತಿಗೆ ಧಕ್ಕೆ ಬಾರದಂತೆ ತರ್ಜುಮೆ ಮಾಡಲಾಗಿದೆ ಎಂದರು. ಪ್ರಪಂಚದ ಯಾವುದೇ ಭಾಷೆಗಳಿಗೂ ಪ್ರಬುದ್ಧತೆಯಲ್ಲಿ ಸರಿಸಾಟಿಯಾದ ಕನ್ನಡ ಭಾಷೆಯಲ್ಲಿಯೇ ತಾಂತ್ರಿಕ ವಿಷಯ ಗಳಾದ ಎಂಜಿನಿಯರಿಂಗ್ ಮತ್ತು ವೈದ್ಯಕೀಯ ವಿಷಯಗಳ ಪಠ್ಯಕ್ರಮಗಳು, ನಾಡಿನ ಭಾಷೆಯಲ್ಲಿ ಆಗಬೇಕು. ಈ ನಿಟ್ಟಿನಲ್ಲಿ, ಸಾಹಿತಿಗಳೂ ಮತ್ತು ಚಿಂತಕರು ಸಲಹೆ ಸೂಚನೆ ನೀಡಿ ಎಂದು ಕೋರಿದರು. ಸಾಹಿತಿ ವೆಂಕಟೇಶ ಮೂರ್ತಿ ಇದ್ದರು.

ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳ ವೀಕ್ಷಣೆಯನ್ನು ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ವಿ.ಸೋಮಣ್ಣ ಅವರು ನಡೆಸಿದರು. ಈ ಸಂದರ್ಭದಲ್ಲಿ ತೋಟಗಾರಿಕೆ ಸಚಿವ ಮುನಿರತ್ನ ಹಾಗೂ ಬಿಬಿಎಂಪಿ ಮುಖ್ಯ ಆಯುಕ್ತ ಗೌರವ ಗುಪ್ತಾ ಸೇರಿ ಸರಕಾರದ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಡಿಎ ಆಯುಕ್ತರ ಅಮಾನತು ಹೈಕೋರ್ಟ್‌ನಿಂದ ಎಚ್ಚರಿಕೆ

ಬೆಂಗಳೂರು: ನಗರದ ಸಿಂಗಸಂದ್ರದ ಏರ್‌ಕ್ರಾಫ್ಟ್ ಹೌಸಿಂಗ್ ಸೊಸೈಟಿ ಲೇಔಟ್‌ನಲ್ಲಿ ಸಾರ್ವಜನಿಕ ಉದ್ಯಾನಕ್ಕೆ ಮೀಸಲಿಟ್ಟಿದ್ದ ಜಾಗದಲ್ಲಿ ಅಕ್ರಮವಾಗಿ ಕಟ್ಟಡ ನಿರ್ಮಿಸಿದ್ದರೂ ಕ್ರಮ ಜರುಗಿಸಲು ವಿಳಂಬ ಮಾಡುತ್ತಿರುವ ಬಿಡಿಎ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಹೈಕೋರ್ಟ್, ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಬಿಡಿಎ ಆಯುಕ್ತರನ್ನು ಅಮಾನತು ಮಾಡುವುದಾಗಿ ಎಚ್ಚರಿಕೆ ನೀಡಿದೆ. ಸಿಂಗ್ರಸಂದ್ರದಲ್ಲಿ ಉದ್ಯಾನಗಳಿಗೆ ಮೀಸಲಿಟ್ಟಿದ್ದ ಜಾಗದಲ್ಲಿ ಅಕ್ರಮ ಕಟ್ಟಡ ನಿರ್ಮಿಸಿರುವ ಕ್ರಮ ಪ್ರಶ್ನಿಸಿ ಸ್ಥಳೀಯ ನಿವಾಸಿ ಎಸ್.ಕೆ ಮಂಜುನಾಥ್ ಎಂಬುವರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾ. ರಿತುರಾಜ್ ಅವಸ್ಥಿ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು. ಈ ವೇಳೆ ನ್ಯಾಯಾಲಯದ ಹಿಂದಿನ ನಿರ್ದೇಶನದಂತೆ ಪಾರ್ಕ್ ಗಳ ಒತ್ತುವರಿ ತೆರವು ಮಾಡದ ಬಿಡಿಎ ವಿರುದ್ಧ ಪೀಠ ಗರಂ ಆಯಿತು. ವರದಿ ಪ್ರಕಾರ ಲೇಔಟ್‌ನ 39 ಪಾರ್ಕ್‌ಗಳ ಪೈಕಿ ಬಹುತೇಕ ಪಾರ್ಕ್‌ಗಳು ಒತ್ತುವರಿಯಾಗಿವೆ. ಉದ್ಯಾನದಲ್ಲಿ ಕಟ್ಟಡ ಕಟ್ಟಲು ಅನುಮತಿ ಕೊಟ್ಟವರು ಯಾರು? ಅಕ್ರಮ ಕಟ್ಟಡಕ್ಕೆ ಹೊಣೆ ಯಾರು? ಕಟ್ಟಡ ನಿರ್ಮಿಸುವಾಗ ಕಣ್ಮುಚ್ಚಿ ಕುಳಿತಿದ್ರಾ? ಎಂದು ಬಿಡಿಎಗೆ ತರಾಟೆಗೆ ತೆಗೆದುಕೊಂಡಿತು. ಆಯುಕ್ತರನ್ನು ಅಮಾನತುಪಡಿಸುವುದಾಗಿ ಎಚ್ಚರಿಕೆ ನೀಡಿತು. ಬಿಡಿಎ ಪರ ವಕೀಲರು ಪೀಠಕ್ಕೆ ಮನವಿ ಮಾಡಿ, ಪೊಲೀಸ್ ಭದ್ರತೆಯಲ್ಲಿ ಒತ್ತುವರಿ ತೆರವುಗೊಳಿಸಲಾಗುವುದು ಎಂದು ಕೋರಿದರು.

ಸಮಾಚಾರ ಸಣ್ಣದಲ್ಲ

ಪುಸ್ತಕ ಬಹುಮಾನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು: ಕರ್ನಾಟಕ ನಾಟಕ ಅಕಾಡೆಮಿಯು 2020ನೇ ಸಾಲಿನಲ್ಲಿ ಪ್ರಕಟವಾಗಿರುವ ರಂಗಭೂಮಿಗೆ ಸಂಬಂಧಿಸಿದ ಕೃತಿಗಳಿಗೆ ಪುಸ್ತಕ ಬಹುಮಾನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕೃತಿಗಳು ಜನವರಿ 2020ರಿಂದ ಡಿಸೆಂಬರ್ 2020ರೊಳಗೆ ಮುದ್ರಣವಾಗಿರಬೇಕು. ಕೃತಿಯ ತಾಂತ್ರಿಕ ಪುಟದಲ್ಲಿ ಮುದ್ರಣ ವರ್ಷವನ್ನು ನಮೂದಿಸಿರಬೇಕು. ಕೃತಿಗಳು ಸಂಶೋಧನಾ ಪ್ರಬಂಧವಾಗಿರಬಾರದು. ಪುಸ್ತಕಗಳು ಯಾವುದೇ ಪದವಿ ಪಿಹೆಚ್ಡಿ ಮತ್ತು ಪಠ್ಯಪುಸ್ತಕಕ್ಕೆ ಸಿದ್ಧಪಡಿಸಿದ ವಿಷಯವಾಗಿರಬಾರದು. ಕಳುಹಿಸಲ್ಪಡುವ ಕೃತಿ ನಾಟಕವಾಗಿರಬಾರದು, ರಂಗಸಂಬಂಧಿ ವಸ್ತುವುಳ್ಳದ್ದಾಗಿರಬೇಕು. ಬಹುಮಾನವನ್ನು ಲೇಖಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ನೀಡಲಾಗುವುದು. ಆಸಕ್ತ ಲೇಖಕರು ತಮ್ಮ ಹೆಸರು, ವಿಳಾಸ, ಕೃತಿಗಳ ಪ್ರಕಟಣೆ ವರ್ಷ, ಪುಸ್ತಕದ ನಾಲ್ಕು ಪ್ರತಿಗಳೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ನಾಟಕ ಅಕಾಡೆಮಿ, ಚಾಲುಕ್ಯ ವಿಭಾಗ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರಿಗೆ ಡಿಸೆಂಬರ್ 15, 2021ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ: 08022237484ನ್ನು ಸಂಪರ್ಕಿಸಬಹು ದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಡಾ.ಸಿ.ರಾಮಚಂದ್ರಗೆ ಕರ್ನಾಟಕ ಧ್ರುವತಾರೆ ಪ್ರಶಸ್ತಿಗೆ ನೇಮಕ

ಬೆಂಗಳೂರು: ವಿಶ್ವ ಕನ್ನಡ ಕಲಾಕೂಟ ನೀಡುವ ಕರ್ನಾಟಕ ಧ್ರುವತಾರೆ ಪ್ರಶಸ್ತಿಗೆ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ ನಿರ್ದೇಶಕರಾದ ಡಾ.ಸಿ.ರಾಮಚಂದ್ರ ಅವರನ್ನು ನೇಮಕ ಮಾಡಲಾಗಿದೆ. ನ.27ರಂದು ಮಿಂಟೋ ಆಸ್ಪತ್ರೆಯ ಎದುರು ಇರುವ ಐಎಂಎ ಸಭಾಂಗಣದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಹಾಗೆಯೇ ನಕ್ಷತ್ರ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಗುತ್ತದೆ. ಜಯದೇವ ಹೃದ್ರೋಗ ಸಂಸ್ಥೆ ನಿರ್ದೇಶಕರಾದ ಡಾ.ಸಿ.ಎನ್.ಮಂಜುನಾಥ್, ಪರಿಸರ ತಜ್ಞ ಆ.ನ. ಯಲ್ಲಪ್ಪ ರೆಡ್ಡಿ, ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥ ನಾರಾಯಣ ಹಾಗೂ ಸಹಕಾರ ಸಚಿವ ಎಸ್ .ಟಿ.ಸೋಮಶೇಖರ್ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ನೀರಿನ ಅದಾಲತ್

ಬೆಂಗಳೂರು: ಬೆಂಗಳೂರು ಜಲಮಂಡಳಿ (ದಕ್ಷಿಣ ವಿಲೇಜ್)-2, (ಆಗ್ನೇಯ-5), (ಪಶ್ಚಿಮ ವಿಲೇಜ್)-1, (ನೈರುತ್ಯ)-4, (ಪೂರ್ವ ವಿಲೇಜ್-3), (ಪೂರ್ವ ವಿಲೇಜ್-1), (ವಾಯುವ್ಯ-5), (ಈಶಾನ್ಯ-3) ಮತ್ತು (ಉತ್ತರ-1) ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್ ನ .25 ರಂದು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ. ಕುಂದು ಕೊರತೆಗಳಿಗೆ ಸಂಬಂಧಿಸಿ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆಮಾಡಿ ದೂರು ದಾಖಲಿಸಬಹುದು ಹಾಗೂ ವಾಟ್ಸ್‌ಆಪ್ ಸಂಖ್ಯೆ: 87622 28888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದು. ಸಾರ್ವಜನಿಕರು ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ತಂಬಾಕು ತ್ಯಜಿಸಿ ಹಿರೋ ಆಗಿರಿ

ಬೆಂಗಳೂರು: ರಾಷ್ಟ್ರೀಯ ಮಾನಸಿಕ ಮತ್ತುನರ ವಿಜ್ಞಾನ ಸಂಸ್ಥೆ (ನಿಮ್ಹಾನ್ಸ್) ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್‌ಒ) ಸಹಯೋಗದಲ್ಲಿ 'ತಂಬಾಕು ತ್ಯಜಿಸಿ ಹಿರೋ ಆಗಿರಿ' ಅಭಿಯಾನ ಆರಂಭಿಸಿದೆ. ವಿಶ್ವ ಮಾನಸಿಕ ಆರೋಗ್ಯ ದಿನದಂದು ಕೇಂದ್ರ ಆರೋಗ್ಯ ಸಚಿವ ಡಾ.ಮನ್ಸುಖ್ ಮಾಂಡವಿಯಾ ಈ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ತಂಬಾಕು ಅಭ್ಯಾಸಗಳಿಂದ ಮುಕ್ತಿ ಹೊಂದಿರುವ, ತಂಬಾಕು ತ್ಯಜಿಸಲು ಪ್ರಯತ್ನಿಸುತ್ತಿರುವ 18 ವರ್ಷ ಮೇಲ್ಪಟ್ಟವರು ತಮ್ಮ ಅನುಭವವನ್ನು 90 ಸೆಕೆಂಡ್ ವಿಡಿಯೋ ಮಾಡಿ ಡಿ.10ರೊಳಗೆ commit2 quittoba Üc$co.ÿನಲ್ಲಿ ಅಪ್ಲೋಡ್ ಮಾಡಬೇಕು. ತಮಿಳು, ತೆಲುಗು, ಕನ್ನಡ, ಮಲೆಯಾಳಿ, ಹಿಂದಿ, ಉರ್ದು, ಮರಾಠಿ ಸೇರಿ ದೇಶದ ಯಾವುದೇ ಭಾಷೆಗಳಲ್ಲಿ ವಿಡಿಯೋ ಮಾಡಬಹುದು. ವಿಡಿಯೋದಲ್ಲಿ ನಿಮ್ಮ ಮತ್ತು ನಿಮ್ಮ ಕೌಟುಂಬಿಕ ಜೀವನ ಬಗ್ಗೆ ಹೇಳಬೇಕು. ಎಷ್ಟು ವರ್ಷದಿಂದ ತಂಬಾಕು ಸೇವನೆ ಮಾಡುತ್ತಿದ್ದೀರಿ, ತ್ಯಜಿಸಲು ಏಕೆ ಬಯಸುತ್ತೀರಿ, ತಂಬಾಕು ತ್ಯಜಿಸಿದ ನಂತರ ಅನುಭವ ಹೇಗಿದೆ? ಎಂಬಿತ್ಯಾದಿ ಅಂಶ ಗಳು ಇರಬೇಕು. ತೀರ್ಪುಗಾರರು ಆಯ್ಕೆ ಮಾಡಿದ 5 ವಿಡಿಯೋಗಳಿಗೆ ಬಹುಮಾನ ನೀಡಲಾಗುತ್ತದೆ. ವಿವರಕ್ಕಾಗಿ 9480817841ಕ್ಕೆ ಸಂಪರ್ಕಿಸಬಹುದು ಎಂದು ಹೇಳಿದರು.

ಸರಕಾರಿ ನುಂಗಣ್ಣರಿಗೆ ಎಸಿಬಿ ಅಧಿಕಾರಿಗಳ ಬಿಸಿ

ಲಕ್ಷಾಂತರ ನಗದು, ಕೋಟ್ಯಂತರ ಮೌಲ್ಯದ ಆಭರಣ ವಶ | ಮನೆಗಳ ಜಾಲಾಡಿದ ಅಧಿಕಾರಿಗಳು

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿರುವ ನಾಲ್ವರು ಭ್ರಷ್ಟ ಅಧಿಕಾರಿ ಮತ್ತು ನೌಕರರ ಮನೆ, ಕಚೇರಿ ಮತ್ತು ಆಪ್ತರ ಮನೆಗಳ ಮೇಲೆ ಭ್ರಷ್ಟಚಾರದ ನಿಗ್ರಹ ದಳದ(ಎಸಿಬಿ) ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿ ಲಕ್ಷಾಂತರ ರು. ನಗದು ಮತ್ತು ಕೋಟ್ಯಂತರ ರು. ಮೌಲ್ಯದ ಚಿನ್ನಾಭರಣ, ಆಸ್ತಿ ಪತ್ರಗಳನ್ನು ವಶಪಡಿಸಿ ಕೊಂಡಿದ್ದಾರೆ.

ಸಕಾಲ ಆಡಳಿತಾಧಿಕಾರಿ ಎಲ್.ಸಿ.ನಾಗರಾಜ್, ಬಿಬಿಎಂಪಿಯ ಪ್ರಥಮ ದರ್ಜೆ ಸಹಾಯಕ ಮಾಯಣ್ಣ, ಯಲಹಂಕ ಸರಕಾರಿ ಆಸ್ಪತ್ರೆಯ ಫಿಸಿಯೋಥೆರಪಿಸ್ಟ್ ಎಸ್.ಎಸ್.ರಾಜಶೇಖರ್, ಬಿಬಿಎಂಪಿ ಗ್ರೂಪ್ ಡಿ ನೌಕರ ಜಿ.ವಿ.ಗಿರಿ ಅವರ ಮನೆ ಮೇಲೆ ಎಸಿಬಿ ಎಸ್.ಪಿ ಯತೀಶ್ ಚಂದ್ರ ನೇತೃತ್ವದ ತಂಡ ದಾಳಿ ನಡೆಸಿವೆ.

ಮಾಯಣ್ಣ ಅವರಿಗೆ ಸೇರಿದ ಸ್ಥಳಗಳ ಮೇಲೆ 48 ಅಧಿಕಾರಿ, ಸಿಬ್ಬಂದಿ 8 ತಂಡಗಳು, 8 ಸ್ಥಳಗಳ ಮೇಲೆ ದಾಳಿ ನಡೆಸಿವೆ. ಮಾಯಣ್ಣ ಅವರ ತಂಗಿ, ಭಾವಮೈದ, ತಮ್ಮಂದಿರು ಹಾಗೂ ಆಪ್ತೆ ಉಮಾದೇವಿ ಅವರ ನಿವಾಸದ ಮೇಲೆ ದಾಳಿ ನಡೆಸಲಾಗಿದೆ. ಎಲ್.ಸಿ.ನಾಗರಾಜ್ ಅವರಿಗೆ ಸೇರಿ ಸ್ಥಳಗಳ ಮೇಲೆ 46 ಅಧಿಕಾರಿ, ಸಿಬ್ಬಂದಿಯ 8 ತಂಡಗಳು 8 ಸ್ಥಳಗಳ ಮೇಲೆ ದಾಳಿ ನಡೆಸಿವೆ. ಎಸ್.ಎಸ್.ರಾಜಶೇಖರ್ ಅವರಿಗೆ ಸೇರಿದ ಸ್ಥಳಗಳ ಮೇಲೆ 14 ಅಧಿಕಾರಿ, ಸಿಬ್ಬಂದಿಯ 2 ತಂಡಗಳು, 2 ಸ್ಥಳಗಳ ಮೇಲೆ ದಾಳಿ ನಡೆಸಿವೆ. ಜಿ.ವಿ.ಗಿರಿ ಅವರಿಗೆ ಸೇರಿದ ಸ್ಥಳಗಳ ಮೇಲೆ 21 ಅಧಿಕಾರಿ, ಸಿಬ್ಬಂದಿಯ 3 ತಂಡಗಳು 3 ಸ್ಥಳಗಳ ಮೇಲೆ ದಾಳಿ ನಡೆಸಿ ರಾತ್ರಿವರೆಗೂ ಪರಿಶೀಲನೆ ನಡೆಸಿವೆ.

ಮಾಯಣ್ಣ ಯಾರು?: ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಪ್ರಥಮ ದರ್ಜೆ ಸಹಾಯಕನಾಗಿ ಮಾಯಣ್ಣ ಕೆಲಸ ಮಾಡುತ್ತಿದ್ದಾರೆ. ಮಾಯಣ್ಣ ತಂದೆ ಬಿಬಿಎಂಪಿಯಲ್ಲಿ ಪೌರಕಾರ್ಮಿಕರಾಗಿದ್ದರು. ಅಕಾಲಿಕ ನಿಧನ ಹೊಂದಿದ ಕಾರಣ, ಅನುಕಂಪದ ಆಧಾರದ ಮೇಲೆ ಮಾಯಣ್ಣ ಬಿಬಿಎಂಪಿಯಲ್ಲಿ ಕೆಲಸ ಗಿಟ್ಟಿಸಿಕೊಂಡಿದ್ದರು. 2002 ಜನವರಿ 22ರಲ್ಲಿ ಬಿಬಿಎಂಪಿಗೆ ನೇಮಕವಾಗಿದ್ದ. ತಂದೆ ನಿಧನದ ನಂತರ ಅನುಕಂಪದ ಆಧಾರದ ಮೇಲೆ ದ್ವಿತೀಯ ದರ್ಜೆ ಗುಮಾಸ್ತನಾಗಿ ನೇಮಕಗೊಂಡು, ಮೊದಲು ಮಾಗಡಿ ರಸ್ತೆ ಹೈಸ್ಕೂಲ್‌ನಲ್ಲಿ ಗುಮಾಸ್ತನಾಗಿದ್ದ ನಂತರ 2004 ರಲ್ಲಿ ಶಾಂತಿನಗರ ಎಇಇ ಕಚೇರಿಗೆ ಪೋಸ್ಟಿಂಗ್ ಆಯ್ತು. ಅಲ್ಲಿಂದ ಮುಂಬಡ್ತಿ ಪಡೆದು ಕೇಂದ್ರ ಕಚೇರಿಗೆ ಬಂದು. ಪಾಲಿಕೆಯ ರಸ್ತೆ ಮತ್ತು ಮೂಲಸೌಕರ್ಯ ವಿಭಾಗಕ್ಕೆ ಮುಂಬಡ್ತಿ ಆಯ್ತು. 2009 ರಂದು ಪಾಲಿಕೆಯ ರಸ್ತೆ ಮತ್ತು ಮೂಲಸೌಕರ್ಯ ವಿಭಾಗದಲ್ಲಿ ಎಫ್‌ಡಿಎ ಆಗಿ ನೇಮಕಗೊಂಡರು.

198 ವಾರ್ಡ್‌ಗಳ ಪಾಲಿಕೆಯ ರಸ್ತೆ ಮತ್ತು ಮೂಲ ಸೌಕರ್ಯ ವಿಭಾಗ ಬಿಲ್‌ಗಳನ್ನು ಮಾಯಣ್ಣನೇ ಪಾವತಿ ಮಾಡುತ್ತಿದ್ದರು. ಬಿಲ್‌ಗಳಿಗೆ ಸಂಬಂಧಿಸಿದಂತೆ ಕಡತಗಳನ್ನು ವಿಲೇವಾರಿ ಮಾಡುತ್ತಿದ್ದ. ಪ್ರತಿ ವರ್ಷ 2 ಸಾವಿರ ಕೋಟಿಯಷ್ಟು ಅನುದಾನ ಪಾಲಿಕೆಯ ರಸ್ತೆ ಮತ್ತು ಮೂಲಸೌಕರ್ಯ ವಿಭಾಗಕ್ಕೆ ಬರುತ್ತಿತ್ತು. ಹೀಗಾಗಿ ಗುತ್ತಿಗೆದಾರರಿಂದ ಬಿಲ್ ಹಾಗೂ ಟೆಂಡರ್ ವೇಳೆ 0.5 ಪರ್ಸೆಂಟೇಜ್ ಪಡೆಯುತ್ತಿದ್ದ. ಪರ್ಸೆಂಟೇಜ್ ಹಣ ಬರುತ್ತಿದ್ದ ಹಿನ್ನೆಲೆ ಕಳೆದ 10 ವರ್ಷದಿಂದ ಒಂದೇ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ.

ಬಿಬಿಎಂಪಿಗೆ 135 ಕೋಟಿ ನಷ್ಟ: ನಕಲಿ ಬಿಲ್ ಹಾಗೂ ನಕಲಿ ಸಹಿ ಹಾಕಿ ಮಾಯಣ್ಣ ಬಿಬಿಎಂಪಿಗೆ ಹಾಗೂ ಸರಕಾರಕ್ಕೆ ಸುಮಾರು 135 ಕೋಟಿ ನಷ್ಟವುಂಟು ಮಾಡಿದ್ದಾರೆ ಎಂಬ ಆರೋಪವಿದೆ.

ಸಕಾಲ ಆಡಳಿತಾಧಿಕಾರಿ ಎಲ್.ಸಿ.ನಾಗರಾಜ್ ಮತ್ತು ಬಿಬಿಎಂಪಿ ಡಿ ಗ್ರೂಪ್ ನೌಕರ ಜಿ.ವಿ.ಗಿರಿ ಅವರ ಮನೆ ಮೇಲೆ ಎಸಿಬಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದರು.

ದಾಳಿಗೊಳಗಾದವರು

- **ಮಾಯಣ್ಣ ಎಂ., ಪ್ರಥಮ ದರ್ಜೆ ಸಹಾಯಕ (ಬಿಬಿಎಂಪಿ), ಬೆಂಗಳೂರು**
- **ಎಲ್.ಸಿ.ನಾಗರಾಜ್, ಸಕಾಲ, ಆಡಳಿತಾಧಿಕಾರಿ, ಬೆಂಗಳೂರು**
- **ರಾಜಶೇಖರ್, ಫಿಸಿಯೋಥೆರಪಿಸ್ಟ್, ಯಲಹಂಕ ಸರಕಾರಿ ಆಸ್ಪತ್ರೆ, ಬೆಂಗಳೂರು**
- **ಜಿ.ವಿ.ಗಿರಿ, ಡಿ ಗ್ರೂಪ್ ಸಿಬ್ಬಂದಿ ಬಿಬಿಎಂಪಿ ಯಶವಂತಪುರ, ಬೆಂಗಳೂರು**

> **ನನ್ನ ಮೇಲಿನ ದಾಳಿಯು ರಾಜಕೀಯ ಪ್ರೇರಿತವಾದ ದಾಳಿಯಾಗಿದೆ. ನನ್ನ ಮೇಲೆ ಇದುವರೆಗೂ ಮೂರು ಬಾರಿ ದಾಳಿಯಾಗಿದೆ. ನಾನು ಪ್ರಾಮಾಣಿಕ ಅಧಿಕಾರಿ. ತೆರಿಗೆ ಕಟ್ಟುತ್ತಿದ್ದೇನೆ. ಇಂಥ ದಾಳಿಗಳಿಗೆಲ್ಲ ನಾನು ಅಂಜುವುದಿಲ್ಲ.**
>
> **-ಎಲ್.ಸಿ. ನಾಗರಾಜ್** ಸಕಾಲ ಆಡಳಿತಾಧಿಕಾರಿ

> **ನಮ್ಮ ಏಳಿಗೆ ಸಹಿಸಲಾಗದೆ ದೂರು ಕೊಟ್ಟಿದ್ದಾರೆ. ನಾನು ಮಾಯಣ್ಣ ಅವರ ವಲಯದಲ್ಲಿ ಇದ್ದೇನೆ ಎಂದು ಬಿಂಬಿಸಲಾಗುತ್ತಿದೆ. ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಮಾಯಣ್ಣ ಜತೆ ಗುರುತಿಸಿಕೊಂಡಿದ್ದಕ್ಕಾಗಿ ಈ ದಾಳಿಯಾಗಿದೆ.**
>
> **-ಉಮಾದೇವಿ** ಮಾಯಣ್ಣ ಆಪ್ತೆ

ಹೀಗಾಗಿ ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯಕಾರ್ಯದರ್ಶಿ 2017 ರಲ್ಲಿ ಮಾಯಣ್ಣ ವಿರುದ್ಧ ಶಿಸ್ತು ಕ್ರಮಕ್ಕೆ ಆದೇಶ ಮಾಡಿದ್ದರು. ಬಿಬಿಎಂಪಿ ಪ್ರಥಮ ದರ್ಜೆ ಗುಮಾಸ್ತನಾಗಿರುವ ಮಾಯಣ್ಣ ಕನ್ನಡ ಸಾಹಿತ್ಯ ಪರಿಷತ್ ಬೆಂಗಳೂರು ನಗರ ಜಿಲ್ಲಾ ಅಧ್ಯಕ್ಷರೂ ಆಗಿದ್ದರು. ಲಾಕ್‌ಡೌನ್‌ಗೂ ಮುನ್ನ ವಿದೇಶ ಪ್ರವಾಸ ಮಾಡಿದ್ದ ಮಾಯಣ್ಣ ದುಬೈ, ಸಿಂಗಾಪುರ್‌ಗೆ ಕುಟುಂಬ ಸಮೇತ ಹೋಗಿ ಎಂಜಾಯ್ ಮಾಡಿ ಬಂದಿದ್ದರು. ಅಲ್ಲದೆ ಲಂಡನ್‌ನಲ್ಲಿ ಸಾಹಿತ್ಯ ಸಮ್ಮೇಳನ ಮಾಡುವುದಾಗಿ ಹಲವರ ಬಳಿ ಹಣ ಸಂಗ್ರಹ ಮಾಡಿದ್ದರು. ಬಿಬಿಎಂಪಿಯಲ್ಲಿ ತನ್ನದೇ ಟೀಮ್ ಕಟ್ಟಿಕೊಂಡಿದ್ದ. ಈ ಎಲ್ಲಾ ಅಕ್ರಮದ ಜತೆಗೆ ಮಾಯಣ್ಣನ ಮೇಲೆ ಮೀಟು ಕೇಸ್ ಕೂಡ ಕೇಳಿ ಬಂದಿತ್ತು. ಮಹಿಳೆಯೊಬ್ಬರು ಮಾಯಣ್ಣನ ಮೇಲೆ ಮೀ ಟು ಕೇಸ್ ಹಾಕಿದ್ದರು. 2002 ರಲ್ಲಿ 8 ಸಾವಿರ ಸಂಬಳಕ್ಕೆ ಬಂದಿದ್ದ ಮಾಯಣ್ಣನಿಗೆ ಈಗ 40 ಸಾವಿರ ರು. ಸಂಬಳ ಸಿಗುತ್ತಿದೆ.

ಮಾಯಣ್ಣನ ಆಸ್ತಿ ಎಲ್ಲೆಲ್ಲಿ ಇದೆ?: ಜೋಸೆಫ್ ಎಂಬಾತ ಮಾಯಣ್ಣನ ಆಸ್ತಿ ಎಷ್ಟಿದೆ ಎಂಬ ಬಗ್ಗೆ ಈ ಹಿಂದೆ ಎಸಿಬಿಗೆ ದೂರು ನೀಡಿದ್ದರು. ಮಾಯಣ್ಣ ಪತ್ನಿ ಉಮಾ ಅವರ ಹೆಸರಿನಲ್ಲಿ ಉಲ್ಲಾಳದಲ್ಲಿ 4 ಅಂತಸ್ತಿನ ಕಟ್ಟಡ, ಮಾಯಣ್ಣ ಹೆಸರಲ್ಲಿ ವೀರಭದ್ರನಗರದಲ್ಲಿ ನಾಲ್ಕು ಅಂತಸ್ತಿನ ಬಂಗಲೆ, ಹಾರ್ತಿಕ್ ಗೌಡ ಎಂಬ ಗುತ್ತಿಗೆ ದಾರರ ಹೆಸರಲ್ಲಿ ಬೇನಾಮಿ ಆಸ್ತಿ, ಮಾಯಣ್ಣ ಹೆಸರಿನಲ್ಲಿ ಕೆಂಗೇರಿ ಬಳಿ 2 ನಿವೇಶನ, ಮಾಯಣ್ಣ ಹೆಸರಲ್ಲಿ ಚಾಮರಾಜ ಪೇಟೆಯಲ್ಲಿ ಕಚೇರಿ, ಬೇನಾಮಿ ಹೆಸರಲ್ಲಿ ಒಂದು ಇನೋವಾ ಕ್ರಿಸ್ಟಾ, ಒಂದು ಬೆನ್ಜ್ ಹೊಂದಿದ್ದು, ಪ್ರಸಿದ್ಧ ದೇವಸ್ಥಾನಗಳಿಗೆ ಲಕ್ಷಾಂತರ ರುಪಾಯಿ ದೇಣಿಗೆ ನೀಡಿರುವ ಬಗ್ಗೆ ದಾಖಲೆಗಳ ಸಮೇತ 2020 ರಲ್ಲಿ ಜೋಸೆಫ್ ಎಸಿಬಿಗೆ ದೂರು ನೀಡಿದ್ದರು. ಇನ್ನು ಬಿಬಿಎಂಪಿ ಕಚೇರಿಯಿಂದ ಟೇಬಲ್, ಜೆರಾಕ್ಸ್ ಮಿಷನ್ ಪಡೆದು ತಮ್ಮ ಮನೆಗೆ ತೆಗೆದುಕೊಂಡು ಹೋಗಿರುವ ಬಗ್ಗೆಯೂ ದೂರಿನಲ್ಲಿ ತಿಳಿಸಿದ್ದಾರೆ.

ಆರ್‌ಐ ಮನೆಯಲ್ಲಿ ಲಕ್ಷಾಂತರ ಮೌಲ್ಯದ ಚಿನ್ನ

ದೊಡ್ಡಬಳ್ಳಾಪುರ: ಕಸಬಾ ವ್ಯಾಪ್ತಿಯ ರಾಜಸ್ವ ನಿರೀಕ್ಷಕ ಲಕ್ಷ್ಮೀನರಸಿಂಹ ಅವರ ಮನೆಯ ಮೇಲೆ ಬುಧವಾರ ಬೆಳಗ್ಗೆ ಎಸಿಬಿ ಅಧಿಕಾರಿಗಳ ತಂಡ ದಾಳಿ ನಡೆಸಿ ದಾಖಲೆ ಪತ್ರಗಳನ್ನು ವಶಕ್ಕೆ ಪಡೆದಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ಎಸಿಬಿ ಡಿವೈಎಸ್ಪಿ ಜಗದೀಶ್ ನೇತೃತ್ವದ 29 ಜನರ ತಂಡ ನಗರದಲ್ಲಿನ ಕುಚ್ಚಪ್ಪನ ಪೇಟೆಯಲ್ಲಿರುವ ಲಕ್ಷ್ಮೀನರಸಿಂಹ ಅವರ ಮನೆಗೆ ಬೆಳಗ್ಗೆ 6ಗಂಟೆ ಸುಮಾರಿಗೆ ಭೇಟಿ ನೀಡಿ ಪರಿಶೀಲನೆ ಆರಂಭಿಸಿದೆ.

ಲಕ್ಷ್ಮೀನರಸಿಂಹ ಅವರು ಸುಮಾರು 15 ವರ್ಷಗಳಿಂದ ನಗರ ಹಾಗೂ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದ ಗ್ರಾಮ ಲೆಕ್ಕಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು. ಎಸಿಬಿ ಅಧಿಕಾರಿಗಳ ತಂಡ ಲಕ್ಷ್ಮೀನರಸಿಂಹ ಅವರ ಮನೆಯಲ್ಲಿ ಚಿನ್ನ, ಬೆಳ್ಳಿ, ನಗದು ಹಾಗೂ ಜಮೀನು, ಮನೆಗಳಿಗೆ ಸಂಬಂಧಿಸಿದ ದಾಖಲೆ ಪತ್ರಗಳನ್ನು ವಶಕ್ಕೆ ಪಡೆದಿದ್ದಾರೆ. ನಗರದ ತಾಲೂಕು ಕಚೇರಿ ಆವರಣದಲ್ಲಿನ ಲಕ್ಷ್ಮೀನರಸಿಂಹ ಅವರ ಕಚೇರಿ ಸೇರಿದಂತೆ 4 ಕಡೆಗಳಲ್ಲಿ ತಪಾಸಣೆ ನಡೆಸಲಾಗಿದೆ ಎಂದು ಎಸಿಬಿ ಅಧಿಕಾರಿಗಳು ತಿಳಿಸಿದ್ದಾರೆ.

ಜಂಟಿ ನಿರ್ದೇಶಕನ ಮನೆಯಲ್ಲಿ 7ಕೆ.ಜಿ ಚಿನ್ನ

ಶಿವಮೊಗ್ಗ: ಗದಗ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಅವರ ಚಾಲುಕ್ಯ ನಗರದ ಮನೆಯ ಮೇಲೆ ಬುಧವಾರ ದಾಳಿ ನಡೆಸಿದ ಎಸಿಬಿ ಪೊಲೀಸರು ಚಿನ್ನಾಭರಣ, ನಗದು ವಶಕ್ಕೆ ಪಡೆದಿದ್ದಾರೆ. ದಾಳಿಯ ಸಮಯದಲ್ಲಿ ಮನೆಯಲ್ಲಿ ₹ 3.5 ಕೋಟಿ ಮೌಲ್ಯದ 7 ಕೆ.ಜಿ.ಚಿನ್ನಾಭರಣ, ₹ 2 ಲಕ್ಷ ಮೌಲ್ಯದ 3 ಕೆ.ಜಿ.ಬೆಳ್ಳಿ, ₹ 15 ಲಕ್ಷ ನಗದು ದೊರೆತಿದೆ. ವಜ್ರದ ಆಭರಣಗಳ ಮೌಲ್ಯಮಾಪನ ನಡೆದಿದೆ. ಗೋಪಾಳದಲ್ಲಿನ ಮತ್ತೊಂದು ಮನೆಗೆ ಧಿಕಾರಿಗಳು ತೆರಳಿದರೂ, ಬೀಗ ಹಾಕಿದ್ದ ಕಾರಣ ಪರಿಶೀಲನೆ ನಡೆಸಲು ಸಾಧ್ಯವಾಗಲಿಲ್ಲ. ಎಸಿಬಿ ಎಸ್ಪಿ ಜಯಪ್ರಕಾಶ್ ನೇತೃತ್ವದಲ್ಲಿ 30ಕ್ಕೂ ಹೆಚ್ಚು ಅಧಿಕಾರಿಗಳು ಮತ್ತು ಸಿಬ್ಬಂದಿ ಪರಿಶೀಲನಾ ಕಾರ್ಯ ನಡೆಸಿದ್ದಾರೆ.

ಆನೇಕಲ್ ಪುರಸಭೆಯ ಉಪಾಧ್ಯಕ್ಷ ಸ್ಥಾನಕ್ಕೆ ಮಾಲಾ ಭಾರ್ಗವ ರಾಜ್ ಅರಸ್ ಅವರು ಅವಿರೋಧವಾಗಿ ಆಯ್ಕೆಯಾದರು. ಶಾಸಕರಾದ ಬಿ. ಶಿವಣ್ಣ, ಪುರಸಭಾಧ್ಯಕ್ಷ ಎನ್.ಎಸ್. ಪದ್ಮನಾಭ ಅಭಿನಂದನೆ ಸಲ್ಲಿಸಿದರು. ಪುರಸಭಾ ಸದಸ್ಯ ಹರೀಶ್ ಗೌಡ ಇದ್ದಾರೆ.

ಒಎಲ್‌ಎಕ್ಸ್ ಆಟೋಸ್ ಡೀಲರ್‌ಗಳ ಸಭೆ

ಬೆಂಗಳೂರು: ಒಎಲ್‌ಎಕ್ಸ್ ಆಟೋಸ್ ಕಾರು ವಿಭಾಗದಲ್ಲಿ ಮಾರುಕಟ್ಟೆ ಮುಂಚೂಣಿಯಲ್ಲಿದೆ. ಭಾರತವು ವಿತರಕರೊಂದಿಗಿನ ಸಂಬಂಧವನ್ನು ಬಲಪಡಿಸಲು ಮತ್ತು ಪೋಷಿಸಲು ವಿತರಕರ ಸಭೆಗಳ ಸರಣಿ ಆಯೋಜಿಸುತ್ತಿದೆ. ಮೂರನೇ ಸಭೆಯನ್ನು ನಗರದ ದಿ ಲೀಲಾ ಪ್ಯಾಲೆಸ್‌ನಲ್ಲಿ ಆಯೋಜಿಸಲಾಗಿದೆ. 200ಕ್ಕೂ ಹೆಚ್ಚು ವಿತರಕರನ್ನು ಒಎಲ್‌ಎಕ್ಸ್ ಆಟೋಸ್ ಹೊಂದಿದೆ. ಸ್ವಾಮ್ಯದ ಕಾರುಗಳನ್ನು ಖರೀದಿಸಲು ಮತ್ತು ಮಾರಾಟ ಮಾಡಲು ಅಮೂಲ್ಯವಾದುದು. ಬ್ರ್ಯಾಂಡ್‌ನ ಉತ್ತಮ ಬೆಲೆ ಪ್ರತಿಪಾದನೆಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪ್ರೋತ್ಸಾಹಿಸಲು ಮೀಟ್ ಉದ್ದೇಶಿಸಲಾಗಿದೆ ಮಾರಾಟಗಾರರು ಕಾರುಗಳನ್ನು ಮಾರಾಟ ಮಾಡುವಾಗ ಒಎಲ್‌ಎಕ್ಸ್ ಆಟೋಸ್ ಪರಿಗಣಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

ಮನೆಮನೆಗೆ ಬರಲಿದೆ ಕೋವಿಡ್ ಲಸಿಕೆ

80 ದ್ವಿಚಕ್ರ ವಾಹನ ಹಾಗೂ 16 ಮೊಬೈಲ್ ವಾಹನಗಳಿಗೆ ಬಿಬಿಎಂಪಿ ಚಾಲನೆ

ಬೆಂಗಳೂರು: ಕೇರ್ ಇಂಡಿಯಾ ಸಹಯೋಗದಲ್ಲಿ ಬಿಬಿಎಂಪಿ ವತಿಯಿಂದ ಮನೆಮನೆಗೆ ಲಸಿಕೆ ನೀಡುವ ಸಲುವಾಗಿ 80 ಲಸಿಕಾ ದ್ವಿಚಕ್ರ ವಾಹನ ಹಾಗೂ 16 ಮೊಬೈಲ್ ಲಸಿಕೆ ವಾಹನಗಳಿಗೆ ಚಾಲನೆ ನೀಡಲಾಗಿದೆ.

ಪ್ರತಿ ವಲಯಕ್ಕೆ 8 ದ್ವಿಚಕ್ರ ವಾಹನಗಳು ಹಾಗೂ 2 ಮೊಬೈಲ್(ನಾಲ್ಕು ಚಕ್ರ ವಾಹನ) ಸೇರಿ ಒಟ್ಟು 80 ದ್ವಿಚಕ್ರ ವಾಹನ ಹಾಗೂ 16 ಮೊಬೈಲ್ ವಾಹನಗಳು ಬ್ಲಾಕ್ ಮತ್ತು ಲೇನ್ ಮಟ್ಟದಲ್ಲಿ ಲಸಿಕೆ ನೀಡಲು ಹೋಗುವ ಆರೋಗ್ಯ ಸಿಬ್ಬಂದಿ ಜತೆ ಕಾರ್ಯನಿರ್ವಹಿಸಲಿವೆ. ನಗರದಲ್ಲಿ ಇದುವರೆಗೆ ಒಟ್ಟು 1,36,99,018 ಡೋಸ್ ಲಸಿಕೆ ನೀಡಲಾಗಿದ್ದು, 80,57,563 ಮೊದಲ ಡೋಸ್(ಶೇ. 88 ರಷ್ಟು), 56,41,455 ಎರಡನೇ ಡೋಸ್(ಶೇ. 62 ರಷ್ಟು) ಲಸಿಕೆ ನೀಡಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆ ನೀಡಲಾಗುತ್ತಿದೆ. ಯಲಹಂಕದ ಡಾ. ಬಿ.ಆರ್.ಅಂಬೇಡ್ಕರ್ ಭವನ ಹಾಗೂ ಮಲ್ಲೇಶ್ವರದ ಯಂಗ್‌ಸ್ಟರ್ ಕಬ್ಬಡಿ ಆಟದ ಮೈದಾನದಲ್ಲಿ ಸ್ಥಾಪಿಸಿರುವ ಬೃಹತ್ ಲಸಿಕಾ ಕೇಂದ್ರಗಳಲ್ಲಿ ಲಸಿಕೆ ನೀಡಲಾಗುತ್ತಿದ್ದು, ವಾಕ್ ಇನ್ ಹಾಗೂ ಡ್ರೈವ್ ಇನ್ ಮೂಲಕ ವಾಹನಗಳಲ್ಲೇ ಲಸಿಕೆ ಪಡೆಯಬಹುದು.

ಮನೆಮನೆಗೆ ಲಸಿಕೆ ವಿತರಣೆ ಮಾಡುವ ಮೊಬೈಲ್ ಲಸಿಕಾ ವಾಹನಗಳಿಗೆ ಬಿಬಿಎಂಪಿ ವಿಶೇಷ ಆಯುಕ್ತ ಗೌರವ್ ಗುಪ್ತಾ ಚಾಲನೆ ನೀಡಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಲಸಿಕಾಕರಣ ಪ್ರಮಾಣವನ್ನು ಮತ್ತಷ್ಟು ಹೆಚ್ಚಿಸುವ ನಿಟ್ಟಿನಲ್ಲಿ ಬ್ಲಾಕ್ ಮತ್ತು ಲೇನ್ ಮಟ್ಟದಲ್ಲಿ ಲಸಿಕೆ ನೀಡಲಾಗುತ್ತಿದೆ. ನಗರದಲ್ಲಿ ಮೊದಲನೇ ಡೋಸ್ ಲಸಿಕೆ ಪಡೆದು ಎರಡನೇ ಡೋಸ್ ಲಸಿಕೆ ಪಡೆಯದಿರುವವರ ಪಟ್ಟಿಯನ್ನು ಕೋವಿನ್ ಪೋರ್ಟಲ್‌ನಿಂದ ಪಡೆದಿದ್ದು, 2ನೇ ಡೋಸ್ ಲಸಿಕೆ ಪಡೆಯದವರಿಗೆ ಕರೆ ಮಾಡಿ ಲಸಿಕೆ ಪಡೆಯಲು ತಿಳಿಸಲಾಗುತ್ತಿದೆ.

ವಾರ್ಡ್‌ವಾರು ಲಸಿಕಾಕರಣ: ಲಸಿಕಾಕರಣ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಕಳೆದ 10 ದಿನಗಳಿಂದ ಪಾಲಿಕೆ ಎಲ್ಲ ವಿಧಾನ ಸಭಾ ಕ್ಷೇತ್ರಗಳಲ್ಲಿ, ಆಯಾ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಆರೋಗ್ಯ ಇಲಾಖೆ ಸಿಬ್ಬಂದಿ, ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಒಂದು ವಾರ್ಡ್‌ನಲ್ಲಿ ಮನೆ-ಮನೆಗೆ ಭೇಟಿ ನೀಡಿ ಲಸಿಕೆ ಪಡೆದಿರುವ ಬಗ್ಗೆ ಖಾತರಿಪಡಿಸಿಕೊಂಡು ಲಸಿಕೆ ಪಡೆಯದವರಿಗೆ ಲಸಿಕೆ ನೀಡುವ ಕಾರ್ಯ ನಡೆಯುತ್ತಿದೆ. ಅದರಂತೆ ಇದುವರೆಗೆ ಸುಮಾರು 70 ವಾರ್ಡ್‌ಗಳಲ್ಲಿ ಆರೋಗ್ಯ ತಂಡ ಭೇಟಿ ನೀಡಿದ್ದು, ಮೊದಲ ಮತ್ತು ಎರಡನೇ ಡೋಸ್ ಸೇರಿ ಸುಮಾರು 35ಸಾವಿರ ಮಂದಿಗೆ ಲಸಿಕೆ ನೀಡಲಾಗಿದೆ.

ವಲಯ	1ನೇ ಡೋಸ್	2ನೇ ಡೋಸ್
ಬೊಮ್ಮನಹಳ್ಳಿ	895233	660940
ದಾಸರಹಳ್ಳಿ	334987	198111
ಪೂರ್ವ ವಲಯ	1657595	1125808
ಮಹದೇವಪುರ	931068	767330
ಆರ್‌ಆರ್ ನಗರ	666041	767330
ದಕ್ಷಿಣ	1662555	1134480
ಪಶ್ಚಿಮ	1327097	914966
ಯಲಹಂಕ	582995	430164

ನೂತನ ಶಾಖೆ ಆರಂಭ

ಬೆಂಗಳೂರು: ಐಐಎಫ್‌ಎಲ್ ಹೋಮ್ ಫೈನಾನ್ಸ್ ಲಿ. ಶಿವಾಜಿನಗರದಲ್ಲಿ ತನ್ನ ಮೊದಲ ಸೇವಾ ಶಾಖೆ ಆರಂಭಿಸಿದೆ. ಗ್ರಾಹಕರಿಗೆ ಗೃಹ ಸಾಲ ಮತ್ತು ಸುರಕ್ಷಿತ ವ್ಯವಹಾರ ಸಾಲ ಒದಗಿಸುವ ಕೆಲಸ ಮಾಡಲಿದೆ.

ಐಐಎಫ್‌ಎಲ್ ಹೋಮ್ ಫೈನಾನ್ಸ್ ಸಂಸ್ಥೆ ಪ್ರಧಾನಮಂತ್ರಿ ಆವಾಜ್ ಯೋಜನೆಯಡಿ ಬೆಂಗಳೂರಿನ 1093 ಕುಟುಂಬಗಳಿಗೆ ಸಾಲ ಸೌಲಭ್ಯ ವಿತರಿಸಿದೆ. ಆದ್ಯತಾ ವಲಯದ ಸಾಲ ಯೋಜನೆ ಅಡಿಯಲ್ಲಿ ಶೇ.92 ಸಾಲಗಳನ್ನು ಕಾಯ್ದಿರಿಸಲಾಗಿದೆ. ಈ ಮನೆಗಳ ಪೈಕಿ ಶೇ.98 ಮನೆಗಳು ಮಹಿಳೆಯರ ಒಡೆತನದಲ್ಲಿವೆ. ಕಂಪನಿ ಕರ್ನಾಟಕದಲ್ಲಿ 1178 ಫಲಾನುಭವಿಗಳಿಗೆ ಒಟ್ಟು 26 ಕೋಟಿ ರು.ಗಳನ್ನು ಒದಗಿಸಿದ್ದು, ಈ ಫಲಾನುಭವಿಗಳೆಲ್ಲರೂ ಆರ್ಥಿಕವಾಗಿ ದುರ್ಬಲವಾಗಿರುವ ವಲಯಗಳು (ಇಡಬ್ಲ್ಯುಎಸ್), ಕಡಿಮೆ ಆದಾಯ ಸಮೂಹ ಮತ್ತು ಮಧ್ಯಮ-ಆದಾಯದ ಸಮೂಹಕ್ಕೆ ಸೇರಿದವರಾಗಿದ್ದಾರೆ ಎಂದು ಕಂಪನಿಯ ಆಂಥೋನಿ ಜೇಮ್ಸ್ ಅವರು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಮ್ಮ ಮೊದಲ ಪೂರ್ಣ ಸೇವಾ ಶಾಖೆ ಆರಂಭಿಸಿರುವುದಕ್ಕೆ ನಮಗೆ ತುಂಬಾ ಸಂತೋಷವಾಗಿದೆ. ಫಿನ್ಟೆಕ್ ಸೇವೆಗಳೊಂದಿಗೆ ಅಸಾಧಾರಣ ಸೇವೆಗಳನ್ನು ಒದಗಿಸುವ ತನ್ನ ಬದ್ಧತೆಯನ್ನು ಐಐಎಫ್‌ಎಲ್ ಹೋಮ್ ಫೈನಾನ್ಸ್ ಮುಂದುವರಿಸಿಕೊಂಡು ಹೋಗಲಿದೆ. ನಮ್ಮ ಸೇವೆಗಳು ಹಾಗೂ ಕಾರ್ಯಾಚರಣೆಯನ್ನು ಹೊಸ ಪ್ರದೇಶಗಳಿಗೆ ವಿಸ್ತರಿಸಲು ನಾವು ಉತ್ಸುಕರಾಗಿದ್ದೇವೆ ಎಂದಿದ್ದಾರೆ.

ಸಿಎಂ ಬೊಮ್ಮಾಯಿ ಭೇಟಿಯಾದ ಬೆಳಗಾವಿ ರಮೇಶ್ ಜಾರಕಿಹೊಳಿ

- **ಲಖನ್ ಸ್ಪರ್ಧೆ ಸಂಬಂಧ ಚರ್ಚೆ**
- **ಮಂಜು ಹಾಗೂ ರಮೇಶ್ ಜಾರಕಿಹೊಳಿ ತಳುಕು ಹಾಕುವುದು ಸರಿಯಲ್ಲ : ಬೊಮ್ಮಾಯಿ**

ಬೆಂಗಳೂರು: ವಿಧಾನ ಪರಿಷತ್ ಚುನಾವಣೆಯಲ್ಲಿ ಬೆಳಗಾವಿಯಿಂದ ಪಕ್ಷೇತರ ಅಭ್ಯರ್ಥಿಯಾಗಿ ಲಖನ್ ಜಾರಕಿಹೊಳಿ ಅವರು ಸ್ಪರ್ಧಿಸಿದ ಬೆನ್ನಲ್ಲೇ, ಮಾಜಿ ಸಚಿವ, ಲಖನ್ ಸಹೋದರ ರಮೇಶ್ ಜಾರಕಿಹೊಳಿ ಅವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿಯಾಗಿ ಚರ್ಚಿಸಿದ್ದಾರೆ.

ಬುಧವಾರ ಬೊಮ್ಮಾಯಿ ಅವರನ್ನು ಭೇಟಿಯಾಗಿ, ಲಖನ್ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ. ಇದಕ್ಕೂ ನನಗೂ ಸಂಬಂಧವಿಲ್ಲ ಹಾಗೂ ಅವರು ಬಿಜೆಪಿ ಅಭ್ಯರ್ಥಿಗೆ ಬಂಡಾಯವಾಗಿ ಸ್ಪರ್ಧಿಸಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ ಎಂದು ತಿಳಿದುಬಂದಿದೆ.

ಈ ಬಗ್ಗೆ ಸುದ್ದಿಗಾರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಬೊಮ್ಮಾಯಿ ಅವರು, ನಮ್ಮ ಅಭ್ಯರ್ಥಿ ಗೆಲುವಿಗೆ ಯಾವುದೇ ರೀತಿಯ ಅಡ್ಡಿಯಾಗುವುದಿಲ್ಲ. ಹೆಚ್ಚಿನ ಮತಗಳ ಅಂತರದಿಂದ ಅವರು ಗೆಲ್ಲಲಿದ್ದಾರೆ. ಆದರೂ ರಮೇಶ್ ಜಾರಕಿಹೊಳಿ ಜತೆ ನಾನು ಮಾತುಕತೆ ನಡೆಸುತ್ತೇನೆ ಎಂದು ತಿಳಿಸಿದರು.

ಬೆಳಗಾವಿ ಪರಿಷತ್ ಚುನಾವಣೆಯ ಬೆಳವಣಿಗೆಗಳ ಮೇಲೆ ಗಮನ ಇರಿಸಿದ್ದೇವೆ. ಲಖನ್ ಜಾರಕಿಹೊಳಿ ಪಕ್ಷದ ಅಧಿಕೃತ ಅಭ್ಯರ್ಥಿಯಲ್ಲ. ಅವರು ಪಕ್ಷೇತರರಾಗಿ ಸ್ಪರ್ಧಿಸಲು ಸ್ವತಂತ್ರರು. ನಮ್ಮ ಅಭ್ಯರ್ಥಿ ಗೆಲುವಿಗೆ ಯಾವುದೇ ರೀತಿಯ ಹಿನ್ನಡೆಯಾಗುವುದಿಲ್ಲ. ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಲಿದ್ದಾರೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ಎ.ಮಂಜು ಮತ್ತು ರಮೇಶ್ ಜಾರಕಿಹೊಳಿಗೆ ಹೋಲಿಕೆ ಮಾಡುವುದು ಸರಿಯಲ್ಲ. ಈಗಲೂ ರಮೇಶ್ ಜಾರಕಿಹೊಳಿ ನಮ್ಮ ಪಕ್ಷದ ಶಾಸಕರು. ಅವರು ಪಕ್ಷ ವಿರೋಧಿ ಚಟುವಟಿಕೆಗಳನ್ನು ನಡೆಸಿಲ್ಲ ಎಂದು ಸ್ಪಷ್ಟಪಡಿಸಿದರು. ಎ.ಮಂಜು ಪಕ್ಷದಲ್ಲಿದ್ದರೂ ಅವರ ಪುತ್ರನನ್ನು ಕಾಂಗ್ರೆಸ್‌ನಿಂದ ಕಣಕ್ಕಿಳಿಸಿದ್ದಾರೆ. ಹೀಗಾಗಿ ಪಕ್ಷ ಅವರನ್ನು ಜವಬ್ದಾರಿಯಿಂದ ಮುಕ್ತಗೊಳಿಸಿರಬಹುದು. ಆದರೆ ಇದಕ್ಕೂ ಜಾರಕಿಹೊಳಿಗೂ ಹೋಲಿಕೆ ಮಾಡುವುದು ಬೇಡ ಎಂದು ಹೇಳಿದರು.

ಡಾ.ಅಂಬೇಡ್ಕರ್ ಸ್ಕೂಲ್: ಸಚಿವರಿಂದ ಪರಿಶೀಲನೆ

ಬೆಂಗಳೂರು: ಜ್ಞಾನಭಾರತಿ ಆವರಣದ ಡಾ.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಅನ್ನು ಪ್ರಧಾನಿ ಮೋದಿ ಅವರು ಡಿ.6ರಂದು ಉದ್ಘಾಟಿಸಲಿದ್ದು, ಕಾಮಗಾರಿಯನ್ನು ಉನ್ನತ ಶಿಕ್ಷಣ ಸಚಿವ ಸಿ.ಎನ್. ಅಶ್ವತ್ಥನಾರಾಯಣ, ವಸತಿ ಸಚಿವ ವಿ. ಸೋಮಣ್ಣ ಮಂಗಳವಾರ ಪರಿಶೀಲಿಸಿದರು. ಬಳಿಕ ಮಾತನಾಡಿದ ಸಿ.ಎನ್. ಅಶ್ವತ್ಥನಾರಾಯಣ, ಕಟ್ಟಡದ ಬಹುತೇಕ ಕೆಲಸಗಳು ಪೂರ್ಣಗೊಂಡಿವೆ. ಬಾಕಿಯಿರುವ ಸಣ್ಣಪುಟ್ಟ ಕೆಲಸಗಳನ್ನು ಆದ್ಯತೆ ಮೇಲೆ ತ್ವರಿತವಾಗಿ ಮುಗಿಸಲಾಗುವುದು. ಅಂಬೇಡ್ಕರ್ ಅವರ ಆಶಯದಂತೆ ಈ ಉನ್ನತ ಸಂಸ್ಥೆಯಲ್ಲಿ ಪರಿಶಿಷ್ಟ ವರ್ಗ ಹಾಗೂ ಬುಡಕಟ್ಟು ಸಮುದಾಯಗಳ ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗುವುದು ಎಂದರು. ಅಂಬೇಡ್ಕರ್ ಹೆಸರಿನ ಈ ಸಂಸ್ಥೆಯಲ್ಲಿ ಜಾಗತಿಕ ಮಟ್ಟದ ಬೋಧನೆ ಮತ್ತು ಸಂಶೋಧನೆಗೆ ಆದ್ಯತೆ ನೀಡಲಾಗುವುದು. ಈ ಮೂಲಕ ಸಮಾಜದಲ್ಲಿ ಶೋಷಿತರ ಸಬಲೀಕರಣಕ್ಕೆ ಹೊಸ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯವಾಗಲಿದೆ' ಎಂದೂ ಹೇಳಿದರು.

ತಂತ್ರಜ್ಞಾನ-ಚಾಲಿತ ಫ್ರೆಶೋ ಸ್ಟೋರ್ ಪ್ರಾರಂಭ

ಬೆಂಗಳೂರು: ಬಿಗ್‌ಬಾಸ್ಕೆಟ್ ಭಾರತದ ಅತಿದೊಡ್ಡ ಆನ್‌ಲೈನ್ ಸೂಪರ್ ಮಾರ್ಕೆಟ್, ಬೆಂಗಳೂರಿನ ಬಸವೇಶ್ವರ ನಗರದಲ್ಲಿ ಹೊಸ ತಂತ್ರಜ್ಞಾನ-ಚಾಲಿತ, ಸ್ವಯಂ-ಸೇವಾ 'ಫ್ರೆಶೋ' ಸ್ಟೋರ್ ಅನ್ನು ಪ್ರಾರಂಭಿಸುವುದರೊಂದಿಗೆ ಉದ್ಯಮಕ್ಕೆ ಪ್ರವೇಶಿಸಿದೆ. 2023ರ ವೇಳೆಗೆ ಭಾರತದಾದ್ಯಂತ 200 ಭೌತಿಕ ಸ್ಥಳಗಳನ್ನು ಮತ್ತು 2026ರ ವೇಳೆಗೆ 800 ಸ್ಥಳಗಳನ್ನು ತೆರೆ ಯುವ ಕಂಪನಿಯ ಯೋಜನೆಯ ಭಾಗವಾಗಿದೆ. ಈ ಮಳಿಗೆಗಳು ಅತ್ಯಂತ ಸ್ಪರ್ಧಾತ್ಮಕ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಸರಕುಗಳನ್ನು ಒದಗಿಸುತ್ತವೆ. ಗ್ರಾಹಕರು ಈಗ ತಾಜಾ ಹಣ್ಣು ಮತ್ತು ತರಕಾರಿ ಆಯ್ಕೆ ಮಾಡಬಹುದು, ಜತೆಗೆ ದೈನಂದಿನ ಮೂಲಭೂತ ಅಂಶಗಳನ್ನು ಫ್ರೆಶೋ ಔಟ್‌ಲೆಟ್‌ಗಳಿಂದ ಆರಿಸಿಕೊಳ್ಳಬಹುದು. ಬಿಗ್‌ಬಾಸ್ಕೆಟ್ ತನ್ನ ಗ್ರಾಹಕರಿಗೆ ಕಡಿಮೆ ವೆಚ್ಚದಲ್ಲಿ ಉತ್ಪನ್ನ ಖರೀದಿಸಲು ಪ್ರತಿ ಅನುಕೂಲಕರ ಪರ್ಯಾಯ ಒದಗಿಸು ತ್ತಿದೆ, ಜತೆಗೆ ಆನ್‌ಲೈನ್‌ನಲ್ಲಿ ಎಂದಿಗೂ ವ್ಯಾಪಾರ ಮಾಡದ ಮುಂದಿನ 500 ಮಿಲಿಯನ್ ಜನರ ಬೇಡಿಕೆ ಪೂರೈಸುತ್ತದೆ.